ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಬುಧವಾರ, ದಿನಾಂಕ : 24ನೇ ಜುಲೈ, 2019

2. ಪೋಡಿ ಮುಕ್ತ ಅಭಿಯಾನದ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

557 (700) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ: -

(ಅ) ಭೂನ್ಯಾಯ ಮಂಡಳಿಯಲ್ಲಿ ಮಂಜೂರಾದ ಮತ್ತು ದರ್ಖಾಸ್ತು ಮಂಜೂರಾದ ಅಂಶಿಕ ಜಮೀನುಗಳ ಖಾತೆದಾರರ ಪೋಡಿಮಾಡದೆ ಸರಿಯಾದ ಜಾಗದ ದಾಖಲೆಗಳನ್ನು ಸಿದ್ದಪಡಿಸುವಲ್ಲಿ ಅಸಾಧ್ಯವಾಗಿದ್ದು, ಈಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸದಿರಲು ಕಾರಣಗಳೇನು;

(ಆ) ಜನಸಾಮಾನ್ಯರಿಗೆ ಸರಿಯಾದ ಜಾಗದ ದಾಖಲೆಗಳನ್ನು ಸಿದ್ಧಪಡಿಸುವಲ್ಲಿ ನೆರವಾಗಲು ಪೋಡಿ ಮುಕ್ತ ಅಭಿಯಾನವನ್ನು ಯಾವಾಗ ಪ್ರಾರಂಭಿಸಲಾಗಿದೆ.

ಈ ಅಭಿಯಾನದಂತೆ ಮಂಡ್ಯ ಜಿಲ್ಲೆಯಲ್ಲಿ ಭೂ-ಮಾಪನ ಕಾರ್ಯ ಪೂರ್ಣಗೊಂಡ ಗ್ರಾಮಗಳುಎಷ್ಟು; (ಸಂಪೂರ್ಣ ಮಾಹಿತಿ ನೀಡುವುದು)

(ಇ) ನಾಗಮಂಗಲ ತಾಲ್ಲೂಕಿನಲ್ಲಿ ಭೂಮಾಪನ ಕಾರ್ಯಪೂರ್ಣಗೊಂಡ ಗ್ರಾಮಗಳಲ್ಲಿ ಖಾತೆದಾರರಿಗೆ ಪಹಣಿ ದಾಖಲಿಸಿ, ಪಹಣಿ ಪತ್ರ ನೀಡಲಾಗಿದೆಯೇ? (ಸಂಪೂರ್ಣ ಮಾಹಿತಿ ನೀಡುವುದು)